# ಅಣ್ಣನ ಶ್ರೀರಕ್ಷೆ ಈ ರಕ್ಷಾ ಬಂಧನ

ಸಂ.ಕ. ಸಮಾಚಾರ ಹುಬ್ಬಳ್ಳಿ

ಸಂಸ್ಕೃತಿ ಸಂಪ್ರದಾಯದ ಮೂಲಕ ಜಗತ್ತನ್ನೇ ತನ್ನತ್ತ ಸೆಳೆದ ರಾಷ್ಟ್ರ ಭಾರತ. ಇಲ್ಲಿ ಪ್ರತಿಯೊಂದು ಹಬ್ಬದ ಆಚರಣೆಗೂ ಅದರದ್ದೇ ಆದ ವಿಶೇಷತೆಯಿದೆ. ಪ್ರತಿಯೊಂದು ಹಬ್ಬವೂ ಸಂದೇಶ ನೀಡುವ ಹಬ್ಬವಾಗಿದ್ದು, ಅದರಲ್ಲಿ ರಕ್ಷಾಬಂಧನವೂ ಭಾರತೀಯ ಸಂಪ್ರದಾಯದಲ್ಲಿ ಅತ್ಯಂತ ಮೆಚ್ಚಿನ ಹಬ್ಬವಾಗಿದೆ.



ಈ ಹಬ್ಬಕ್ಕೂ ಅತ್ಯಂತ ಪ್ರಾಮುಖ್ಯತೆಯಿದ್ದು ಸಂಬಂಧಗಳನ್ನು ಗಟ್ಟಿಗೊಳಿಸುವ ವಿಶೇಷ ಹಬ್ಬವಾಗಿದೆ. ರಕ್ಷಾಬಂಧನ ಸಹೋದರ-ಸಹೋದರಿಯರ ವಿಶ್ವಾಸ ಹಬ್ಬ ಎಂದೆ ಹೇಳಬಹುದಾಗಿದೆ.

ಶ್ರಾವಣ ಮಾಸ ಬಂತೆಂದರೆ ಸಾಕು, ಹಬ್ಬಗಳ ಸುಗ್ಗಿ ಎಂದೆ ಹೇಳಬಹುದು. ಈ ಮಾಸದಿಂದ ಒಂದರ ಮೇಲೊಂದು ಹಬ್ಬಗಳ ಆಗಮನ ಶುರುವಾಗುತ್ತದೆ. ಮನೆಯಲ್ಲಿ ಸಂತಸ, ಸಂಭ್ರಮ ಮನೆ ಮಾಡುವುದು ಹಬ್ಬಗಳಿಂದಲೇ. ಇನ್ನು ನಾಡಿನ ಹೆಣ್ಣು ಮಕ್ಕಳಲ್ಲಿ ಅತ್ಯಂತ ಸಂತೋಷ ತರುವ ಹಬ್ಬ ಎಂದರೆ ಅದುವೇ ರಕ್ಷಾಬಂಧನ. ತಂಗಿ ಪ್ರೀತಿಯಿಂದ ಅಣ್ಣನ ರಕ್ಷಣೆಗಾಗಿ ಕಟ್ಟುವ ನೂಲಿನ ಹಬ್ಬ.

ಸಹೋದರ-ಸಹೋದರಿಯರ ಸಂಬಂಧ ಗಟ್ಟಿಗೊಳಿಸುವ ಹಬ್ಬ ಇದಾಗಿದೆ. ಇದು ಅಣ್ಣ-ತಂಗಿಯರ ಮತ್ತು ಅಕ್ಕ-ತಮ್ಮನ ನಡುವಿನ ಬಾಂಧವ್ಯ ಸಾರುವ ಹಬ್ಬವಾಗಿರುವುದರಿಂದ, ಈ ಹಬ್ಬದಂದು ಸಹೋದರ-ಸಹೋದರಿಯರು ಪರಸ್ಪರರ ಏಳಿಗೆ, ಸಂತೋಷ ಬಯಸುತ್ತಾರೆ.

**ಹೆಸರೆ ಹೇಳುವುದು ಕಥೆಯಾ....**

"ರಕ್ಷಾ ಬಂಧನ್" ಎನ್ನುವ ಹೆಸರೇ ಸೂಚಿಸುವಂತೆ ಇದು "ರಕ್ಷಣೆ ನೀಡುವ ಬಂಧನ". ಈ ಹಬ್ಬದಂದು ಸಹೋದರರು ಅವರ ಸಹೋದರಿಯರಿಗೆ ಎಂತಹ ಕಷ್ಟದಲ್ಲಾದರೂ ಸರಿ ಬಂದು ಕಾಪಾಡುತ್ತೇವೆ ಎಂಬ ಪ್ರಮಾಣ ಮಾಡುತ್ತಾರೆ. ಅದೇ ರೀತಿ ಸಹೋದರಿಯರು ದೇವರು ತಮ್ಮ ಸಹೋದರನನ್ನು ದುಷ್ಟಶಕ್ತಿಗಳಿಂದ ಕಾಪಾಡಲಿ ಎಂದು ಅರಸಿಕೊಳ್ಳುತ್ತ ರಕ್ಷಾ ಬಂಧನ ಕಟ್ಟುತ್ತಾರೆ. ಈ ಹಬ್ಬವು ಶ್ರಾವಣ ಪೂರ್ಣಿಮೆಯ ದಿನದಂದು ಬರುತ್ತದೆ.

**ಬಾಂಧವ್ಯ ಬೆಸೆಯುವ ಹಬ್ಬ...**

ಒಡಹುಟ್ಟಿದವರ ನಡುವೆ ಆಚರಿಸಲ್ಪಡುವ ಈ ರಕ್ಷಾ ಬಂಧನ ಹಬ್ಬ ಕೇವಲ ಒಡಹುಟ್ಟಿದವರಿಗೆ ಮಾತ್ರವಲ್ಲದೆ ಎಲ್ಲಾ ಬಗೆಯ ಸಹೋದರ -ಸಹೋದರಿ ಸಂಬಂಧ, ಬಾಂಧವ್ಯ ಗಟ್ಟಿಗೊಳಿಸುವಂತಹ ದಿನ. ರಾಖಿ ಕಟ್ಟುವುದು ಭಾವನಾತ್ಮಕ ಸಂಕೇತವಾಗಿದೆ. ಪ್ರತಿಯೊಬ್ಬ ಸಹೋದರಿಯೂ ರಕ್ಷಾಬಂಧನ ಹಬ್ಬಕ್ಕಾಗಿ ಹಾತೊರೆಯುತ್ತಾರೆ. ರಾಖಿ ಕಟ್ಟುವ ಮೂಲಕ ಅಣ್ಣನಿಗೆ ಸಿಹಿ ತಿನಿಸಿ, ಬಾಯಿ ಸಿಹಿ ಮಾಡುವ ಮೂಲಕ ಆರತಿ ಮಾಡಿ, ಸೋದರನ ಆಶೀರ್ವಾದ ಪಡೆಯುತ್ತಾರೆ.

**ಹಳೆಯ ಸಂಪ್ರದಾಯ...**

ರಕ್ಷಾ ಬಂಧನ ಕಟ್ಟುವುದು ಹಿಂದಿನಿಂದಲೂ ಬಂದ ಪದ್ಧತಿಯಾಗಿದೆ. ಅಣ್ಣ ತಂಗಿಯರ ಸಂಬಂಧ ಗಟ್ಟಿಗೊಳಿಸುವ ಈ ಪವಿತ್ರ ದಿನ ಹಿಂದೆ ಉತ್ತರ ಭಾರತದಲ್ಲಿ ಹೆಚ್ಚು ಪ್ರಚಲಿತದಲ್ಲಿತ್ತು. ನಂತರ ಕಾಲಕ್ರಮೇಣವಾಗಿ ದೇಶದುದ್ದಕ್ಕೂ ಚಾಚಿದ್ದು ಪ್ರತಿ ವರ್ಷ ಶ್ರಾವಣದ ನೂಲು ಹುಣ್ಣಿಮೆಯಂದು ರಕ್ಷಾ ಬಂಧನ ಆಚರಿಸಲಾಗುತ್ತದೆ.

**ಇತಿಹಾಸ:** ಇತಿಹಾಸದಲ್ಲಿ ರಾಖಿಯ ಕುರಿತಾದ ಉಲ್ಲೇಖಗಳು ದಂತಕತೆಗಳ ಪ್ರಕಾರ ಅಲೆಕ್ಸಾಂಡರನು ಭಾರತದ ಮೇಲೆ ದಂಡೆತ್ತಿ ಬಂದಾಗ ಅವನನ್ನು ಧೈರ್ಯದಿಂದ ಎದುರಿಸಿದವನು ಪೋರಸ್. ಆಗ ಅವರಿಬ್ಬರ ನಡುವೆ ಯುದ್ಧ ಆರಂಭಗೊಂಡಿತು. ಇದೇ ಸಮಯದಲ್ಲಿ ಅಲೆಕ್ಸಾಂಡರನ ಪತ್ನಿ ರೊಕ್ಸಾನಳು ಪೋರಸನಿಗೆ ಒಂದು ಪವಿತ್ರ ದಾರವನ್ನು (ರಾಖಿ) ಕಳುಹಿಸಿದಳು. ಅದರ ಜೊತೆಗೆ ಒಂದು ಮನವಿ ಸಹ ಇತ್ತು. ತನ್ನ ಪತಿಯನ್ನು ಕೊಲ್ಲದಿರುವಂತೆ ಕೇಳಿಕೊಂಡ ಮನವಿ ಅದಾಗಿತ್ತು. ಮುಂದೆ ನಡೆದ ಯುದ್ಧದಲ್ಲಿ ಪೋರಸ್ ಅಲೆಕ್ಸಾಂಡರನನ್ನು ಕೊಲ್ಲದೆ ಉಳಿಸಿದನು. ಇದಕ್ಕೆ ಕಾರಣ ಆತನ ಕೈಯಲ್ಲಿ ಆತ ಕಟ್ಟಿಕೊಂಡಿದ್ದ ರಾಖಿ ಅವನನ್ನು ತಡೆದು ನಿಲ್ಲಿಸಿತ್ತು. ಮತ್ತೊಂದು ಘಟನೆಯಲ್ಲಿ ಚಿತ್ತೂರಿನ ರಾಣಿ ಕರ್ಣಾವತಿಯು ಗಂಡನನ್ನು ಕಳೆದುಕೊಂಡು ವೈಧವ್ಯದ ಜೀವನ ನಡೆಸುತ್ತಿದ್ದಳು. ಆಗ ಆಕೆಯು ಚಕ್ರವರ್ತಿ ಹುಮಾಯೂನನಿಗೆ ರಾಖಿ ಕಳುಹಿಸಿದಳು. ಇದಕ್ಕೆ ಕಾರಣ ಚಕ್ರವರ್ತಿ ಬಹದ್ದೂರ್ ಷಾನು ಈಕೆಯ ರಾಜ್ಯದ ಮೇಲೆ ದಂಡೆತ್ತಿ ಬರುವ ನಿರ್ಧಾರಕ್ಕೆ ಬಂದಿದ್ದನು. ಆಗ ಆಕೆಯು ಹುಮಾಯೂನನ ಸಹಾಯ ಬಯಸಿ ರಾಖಿ ಕಳುಹಿಸಿದ್ದಳು. ಇದನ್ನು ಮುಟ್ಟುವ ಮೂಲಕ ಸ್ವೀಕರಿಸಿದ ಹುಮಾಯೂನನು ತನ್ನ ಸೇನೆಯನ್ನು ರಾಣಿ ಕರ್ಣಾವತಿಯ ಸಹಾಯಕ್ಕೆ ಧಾವಿಸುವಂತೆ ಸೂಚಿಸಿದನು. ಆದರೆ ಸೈನ್ಯವು ಅಲ್ಲಿಗೆ ತಲುಪಲು ತಡವಾಯಿತು. ಇದೇ ವೇಳೆಗೆ ರಾಣಿ ಕರ್ಣಾವತಿಯು ಇತರೆ ಹೆಂಗಸರೊಂದಿಗೆ ಕೂಡಿ, ತನ್ನ ಮಾನ ರಕ್ಷಣೆಗಾಗಿ ಜೌಹರ್ ಮಾಡಿಕೊಳ್ಳುವ ಮೂಲಕ ಪ್ರಾಣ ತ್ಯಾಗ ಮಾಡಿದ್ದಳು. ಮುಂದೆ ಬಹದ್ದೂರ್ ಷಾನನ್ನು ಹುಮಾಯೂನ್ ಹೊರಗೆ ಹಾಕಿ, ಕರ್ಣಾವತಿಯ ಮಗ ವಿಕ್ರಮಜೀತನನ್ನು ಸಿಂಹಾಸನದಲ್ಲಿ ಕೂರಿಸಿದನು.

**-ಸುಷ್ಮಾ ಪವಾರ**

Scanned with CamScanner